ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 12–08–2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಅಖಿಲ ಭಾರತ ಭಾಷಾ ಸೌಹಾರ್ದ ದಿನಾಚರಣೆ ಅಂಗವಾಗಿ ಸಂವಾದ ಗೋಷ್ಠಿ ಮತ್ತು ಬಹುಭಾಷಾ ಕವಿಗೋಷ್ಠಿ.<br><br>ಚಾಲನೆ:<br><br>ಶ್ರೀಮತಿ ಉಮಾಶ್ರೀ,<br>ಕನ್ನಡ, ಸಂಸ್ಕೃತಿ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಿರಿಯ ನಾಗರಿಕರ ಸಬಲೀಕರಣ ಸಚಿವರು<br><br>ಆಶಯ ನುಡಿ:<br><br>ಡಾ. ಪುರುಷೋತ್ತಮ ಬಿಳಿಮಲೆ,<br>ಮುಖ್ಯಸ್ಥರು,<br>ಕನ್ನಡ ಅಧ್ಯಯನ ಪೀಠ,<br>ಜವಾಹರಲಾಲ್ ನೆಹರೂ ವಿಶ್ವವಿದ್ಯಾನಿಲಯ,<br>ನವದೆಹಲಿ | 13–8–2016<br>ಶನಿವಾರ<br>ಬೆಳಿಗ್ಗೆ<br>10–30 ಗಂಟೆಗೆ | ನಯನ ಸಭಾಂಗಣ,<br>ಕನ್ನಡಭವನ, ಜೆ.ಸಿ. ರಸ್ತೆ,<br>ಬೆಂಗಳೂರು. |
| 2. | ಕರ್ನಾಟಕ ವಿಧಾನ ಮಂಡಲದ ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿಯ ಪ್ರಾರಂಭಿಕ ಸಭೆ<br><br>ಸಾ. ರಾ. ಮಹೇಶ್<br>ಅಧ್ಯಕ್ಷರು, | 16–8–2016<br>ಮಂಗಳವಾರ<br>ಅಪರಾಹ್ನ<br>12–00 ಗಂಟೆಗೆ | ಕೊಠಡಿ ಸಂಖ್ಯೆ 110,<br>ಮೊದಲನೇ ಮಹಡಿ,<br>ವಿಧಾನಸೌಧ,<br>ಬೆಂಗಳೂರು. |

ನಿರ್ದೇಶಕರ ಪರವಾಗಿ

<u>ಪತ್ರಿಕಾ ಪ್ರಕಟಣೆ</u>

# "ಕರ್ನಾಟಕ ಕಲಾಶ್ರೀ" ಪ್ರಶಸ್ತಿ ಪ್ರಕಟ

ಬೆಂಗಳೂರು, ಆಗಸ್ಟ್ 12 (ಕರ್ನಾಟಕ ವಾರ್ತೆ)

ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯು 2016–17 ನೇ ಸಾಲಿನ ಅಕಾಡೆಮಿ ಪ್ರಶಸ್ತಿಗೆ ಕಲಾವಿದರನ್ನು ಆಯ್ಕೆ ಮಾಡಲು ಕಲಾವಿದರ ಪ್ರತಿಭೆ, ಸೇವಾ ಹಿರಿತನ, ಶಿಷ್ಯರನ್ನು ತಯಾರು ಮಾಡಿರುವುದು, ಗ್ರಂಥಗಳ ರಚನೆ, ಪ್ರಸ್ತುತ ಸಂಬಂಧಪಟ್ಟ ಪ್ರಕಾರಕ್ಕೆ ಮಾಡುತ್ತಿರುವ ಸೇವೆ ಇವುಗಳನ್ನೆಲ್ಲಾ ಕೂಲಂಕಷವಾಗಿ ಚರ್ಚಿಸಿ, ಪರಿಶೀಲಿಸಿದ ಸಮಿತಿ ಸಭೆಯಲ್ಲಿ ಈ ಕಲಾವಿದರನ್ನು "ಕರ್ನಾಟಕ ಕಲಾಶ್ರೀ" ಪ್ರಶಸ್ತಿಗೆ ಆಯ್ಕೆಮಾಡಿದೆ.

<u>ವಾರ್ಷಿಕ ಪ್ರಶಸ್ತಿಗಾಗಿ:</u>

ಹಿಂದೂಸ್ತಾನಿ ಸಂಗೀತ – ತಬಲಾದಲ್ಲಿ ಧಾರವಾಡದ ಪಂ. ರವೀಂದ್ರ ಯಾವಗಲ್ ಹಾಗೂ ಗಮಕದಲ್ಲಿ ಕಾಸರಗೋಡಿನ ಸುಬ್ರಹ್ಮಣ್ಯ ಭಟ್ ಇವರನ್ನು ಗೌರವ ಪ್ರಶಸ್ತಿಗಾಗಿ ಆಯ್ಕೆ ಮಾಡಲಾಗಿದೆ.

ಗಾಯನದಲ್ಲಿ ಬೆಂಗಳೂರಿನ ಡಾ. ಕೆ. ವರದರಂಗನ್, ಪಿಟೀಲುನಲ್ಲಿ ಮೈಸೂರಿನ ಶ್ರೀಮತಿ ನಾಗರತ್ನಮ್ಮ, ಮೃದಂಗದಲ್ಲಿ ಕೋಲಾರದ ಸೂರ್ಯನಾರಾಯಣಾಚಾರ್ಯ, ಮೋರ್ಚಿಂಗ್‌ನಲ್ಲಿ ಬಳ್ಳಾರಿಯ ಗುರುರಾಜ್ ಅವರನ್ನು ಆಯ್ಕೆ ಮಾಡಲಾಗಿದೆ.

ಹಿಂದೂಸ್ತಾನಿ ಸಂಗೀತ ಗಾಯನದಲ್ಲಿ ಉತ್ತರ ಕನ್ನಡ ಜಿಲ್ಲೆ ಹೊನ್ನಾವರದ ಪರಮೇಶ್ವರ ಹೆಗಡೆ ಹಾಗೂ ಬೀದರ್‌ನ ರಾಮುಲು ಗಾದಗಿ ಅವರನ್ನು ಮತ್ತು ತಬಲದಲ್ಲಿ ಬೆಳಗಾವಿಯ ಬಂಡೋಪಂತ್ ಕುಲಕರ್ಣಿ ಅವರನ್ನು ಆಯ್ಕೆ ಮಾಡಲಾಗಿದೆ.

ಯಾದಗಿರಿಯ ಆಮಯ್ಯ ಮಠ, ಗದಗದ ವೀರೇಶ ಕಿತ್ತೂರ ಹಾಗೂ ಬೆಂಗಳೂರಿನ ಸುಕುಮಾರ ಬಾಬು ಅವರನ್ನು ಲಯವಾದ್ಯದಡಿ ಆಯ್ಕೆ ಮಾಡಲಾಗಿದೆ.

ಮೈಸೂರಿನ ಶ್ರೀಮತಿ ಶೀಲಾ ಶ್ರೀಧರ್, ಬೆಂಗಳೂರಿನ ಸತ್ಯನಾರಾಯಣರಾಜು ಹಾಗೂ ಶ್ರೀಮತಿ ಪೂರ್ಣಿಮಾ ಅಶೋಕ್ ಅವರನ್ನು ನೃತ್ಯಕ್ಕಾಗಿ ಆಯ್ಕೆಮಾಡಲಾಗಿದೆ.

ತುಮಕೂರಿನ ಹನುಮಂತದಾಸ್ ಅವರನ್ನು ಕಥಾಕೀರ್ತನಕ್ಕಾಗಿ ಆಯ್ಕೆ ಮಾಡಲಾಗಿದೆ.

**ಬೆಳಗಾವಿ ಶ್ರೀಮತಿ ಭಾರತಿ ಭಟ್ ಹಾಗೂ ಮಂಡ್ಯದ ಶ್ರೀಮತಿ ಶೈಲಜಾ ಚಂದ್ರಶೇಖರ್ ಅವರನ್ನು ಗಮಕಕ್ಕಾಗಿ ಆಯ್ಕೆ ಮಾಡಲಾಗಿದೆ ಎಂದು ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

**ಪಿಎಸ್‌ಐ:ಜೆಪಿಆರ್**

# <u>ಕಬ್ಬನ್ ಉದ್ಯಾನವನದಲ್ಲಿ ಈ ಭಾನುವಾರ</u>

**ಬೆಂಗಳೂರು, ಆಗಸ್ಟ್ 12 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ:14-08-2016ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1. ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಉದಯರಾಗ**" ಎಂಬ ಶೀರ್ಷಿಕೆಯಡಿ ಶ್ರೀ ಧನರಾಜ್ ಮತ್ತು ತಂಡದವರಿಂದ ರಂಗಗೀತೆ ಮತ್ತು ಜಾನಪದ ಗೀತೆಗಳ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2. ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಸಂಧ್ಯಾರಾಗ**" ಎಂಬ ಶೀರ್ಷಿಕೆಯಡಿ ಶ್ರೀ ಡಿ.ಎಂ.ರಮೇಶ ಮತ್ತು ತಂಡದವರಿಂದ ಜನಪದ ಗೀತೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
3. ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

4. ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ (ರಿ), ಲಾಲ್‌ಬಾಗ್, ಬೆಂಗಳೂರುರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ರೀತಿಯ ಹಣ್ಣುಗಳು ಮತ್ತು ಹಣ್ಣಿನ ಜ್ಯೂಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
5. ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
6. ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ-ಆಪರೇಟೀವ್ ಸೊಸೈಟಿ, ಲಾಲ್‌ಬಾಗ್, ಬೆಂಗಳೂರುರವರು ವಿವಿಧ ಅಲಂಕಾರಿಕ ಗಿಡಗಳ ಮಾರಾಟವನ್ನು ವಿಧಾನಸೌಧ ಮತ್ತು ಹೈಕೋರ್ಟ್ ಮುಂಭಾಗದ ಮೆಟ್ರೊ ನಿಲ್ದಾಣದ ಹತ್ತಿರ ಕೈಗೊಳ್ಳುತ್ತಾರೆ.
7. ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:**

**I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- **ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಕು: ಎಂ.ಎಸ್. ಸಂಜನಾ ರಾವ್ ಮತ್ತು** ತಂಡದವರಿಂದ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ **ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ ಶ್ರೀ ವಾಣಿ ವಿದ್ಯಾ ಕೇಂದ್ರ, ರಾಜಾಜಿನಗರ, ಬೆಂಗಳೂರು ಶಾಲಾ ವಿದ್ಯಾರ್ಥಿನಿಯಾದ ಕುಮಾರಿ. ಸಹನಾ ನಾಯಕ್‌ರವರಿಂದ ಹಿಂದೂಸ್ತಾನಿ ಗಾಯನ ಮತ್ತು ರಕ್ಷಿತ್ ರವರಿಂದ ತಬಲ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 09.00 ಗಂಟೆಯಿಂದ 10.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಬಾಲಭವನ ಸೊಸೈಟಿ, ಬೆಂಗಳೂರುರವರ ಸಹಯೋಗದೊಂದಿಗೆ ಅನುಶ್ರಾವ ತಂಡದಿಂದ ದೇಶಭಕ್ತಿಗೀತೆಗಳು ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಸಂಜೆ 4.00 ಗಂಟೆಯಿಂದ 5.00 ಗಂಟೆಯವರೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮತ್ತು ಅಕ್ಷಯ ಫೌಂಡೇಷನ್‌ರವರ ಸಹಯೋಗದೊಂದಿಗೆ ಶ್ರೀ. ಜೀತುರೇಶ್ ರವರಿಂದ ಭಾರತದ ಸ್ವಾತಂತ್ರಕ್ಕೆ**

ಕನ್ನಡಿಗರ   ಕೊಡುಗೆಗಳು ಕುರಿತು ಉಪನ್ಯಾಸ ಕಾರ್ಯಕ್ರಮ ಹಾಗೂ ಪ್ರಿಯಾಂಕ ಮತ್ತು ತಂಡದವರಿಂದ ನಾಡಗೀತೆಗಳಿಗೆ ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

**II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**

- ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ವಿದ್ಯಾರಣ್ಯ ಸಂಸ್ಥೆಯು ನಡೆಸುತ್ತಿರುವ ಬುದ್ದಿಮಾಂದ್ಯ  ಮಕ್ಕಳು ಸಿದ್ದಪಡಿಸಿದ ವಸ್ತುಗಳ ಪ್ರದರ್ಶನ  ಮತ್ತು ಮಾರಾಟವನ್ನು  ಏರ್ಪಡಿಸಲಾಗಿದೆ.

ಜಡಿಯಪ್ಪ:ಜಿಪಿಆರ್.